ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ಖಾ.ಅ.ನೋ/2019-20 ದಿನಾಂಕ:19.09.2019

## ಸುತ್ತೋಲೆ

ವಿಷಯ: 2020ರ ದ್ವಿತೀಯ ಪಿಯುಸಿ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳಲು ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ

ಉಲ್ಲೇಖ: 1. ಈ ಕಛೇರಿಯ ಸಮ ಸಂಖ್ಯೆ ಅಧಿಸೂಚನೆ ದಿನಾಂಕ: 31.07.2019

2. ಸರ್ಕಾರದ ಆದೇಶ ಸಂಖ್ಯೆ : ಇಡಿ 195 ಡಿಜಿಡಿ 2017, ದಿನಾಂಕ 20.03.2018

* * * * *

ಮಾರ್ಚ್ 2020ರಲ್ಲಿ ನಡೆಸುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ (Private) ಅಭ್ಯರ್ಥಿಗಳು ಪರೀಕ್ಷಾ ಶುಲ್ಕವನ್ನು ಸಂದಾಯ ಮಾಡಲು ಉಲ್ಲೇಖ (1)ರಲ್ಲಿ ದಂಡ ಶುಲ್ಕವು ಸೇರಿದಂತೆ ಅಂತಿಮ ದಿನಾಂಕವನ್ನು 18.09.2019ರವರೆಗೆ ನಿಗಧಿಗೊಳಿಸಲಾಗಿತ್ತು.

ಆದರೆ ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿಯ ಮೇರೆಗೆ ಮಾರ್ಚ್ 2020ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು / ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕಡೆಯ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತರಿಸಲಾದ ಕಡೇ ದಿನಾಂಕ | ಕಾಲೇಜಿನವರು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿದ ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ತಲುಪಿಸುವ ದಿನಾಂಕ |
|---|---|---|
| **04.10.2019** | **05.10.2019** | **10.10.2019** |

ಅರ್ಜಿ ಸ್ವೀಕರಿಸಲು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿ ಪಾವತಿಸಬೇಕಾದ ಶುಲ್ಕ ವಿವರ

| ಇಲಾಖಾ ಸಮಸಂಖ್ಯೆ ಮೂಲ ಸುತ್ತೋಲೆ ದಿನಾಂಕ 04.07.2019 ರನ್ವಯ | ಸುತ್ತೋಲೆಯಲ್ಲಿ ವಿವರಿಸಿದಂತೆ ಶುಲ್ಕ |
|---|---|
| ವಿಸ್ತರಿಸಿದ ದಿನಾಂಕ 04.10.2019 ರಿಂದ 10.10.2019 ರವರೆಗಿನ ದಂಡ ಶುಲ್ಕದೊಂದಿಗೆ | ದಿನವೊಂದಕ್ಕೆ ರೂ 50/- ರಂತೆ (ರಜಾ ದಿನಗಳನ್ನು ಹೊರತು ಪಡಿಸಿ) |

ಸದರಿ ಪರೀಕ್ಷೆಗಳಿಗೆ ಖಾಸಗಿ (Private) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಇದೇ ಅಂತಿಮ ಅವಕಾಶವಾಗಿರುತ್ತದೆ. ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಖಾಸಗಿ ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು. ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲಾಗುವುದಿಲ್ಲ.

ಜಿಲ್ಲಾ ಉಪನಿರ್ದೇಶಕರು ಒಂದೇ ಕಂತಿನಲ್ಲಿ ಎಲ್ಲಾ ಖಾಸಗಿ (Private) ಅಭ್ಯರ್ಥಿಗಳ ಅರ್ಜಿಗಳನ್ನು ಖುದ್ದಾಗಿ ಇಲಾಖೆಗೆ ದಿನಾಂಕ 14.10.2019 ರಂದು ಕೇಂದ್ರ ಕಛೇರಿಗೆ ಸಲ್ಲಿಸುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು :

1. ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಇಲಾಖಾ ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ.
4. ಕಛೇರಿ / ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ,ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ಖಾ.ಅ.ನೋ/2019-20 ದಿನಾಂಕ:19.09.2019

**ತಿದ್ದುಪಡಿ**

ಮಾರ್ಚ್ 2020ರಲ್ಲಿ ನಡೆಸುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ (Private) ಅಭ್ಯರ್ಥಿಗಳು ಪರೀಕ್ಷಾ ಶುಲ್ಕವನ್ನು ಸಂದಾಯ ಮಾಡಲು ದಿನಾಂಕವನ್ನು ಈ ಕಛೇರಿಯ ಸಮಸಂಖ್ಯೆ ಸುತ್ತೋಲೆಯಲ್ಲಿ ವಿಸ್ತರಿಸಿ ಆದೇಶಿಸಿದೆ. ಸದರಿ ಆದೇಶದಲ್ಲಿ ವಿಸ್ತರಿಸಿದ ದಿನಾಂಕಕ್ಕೆ ದಂಡ ಶುಲ್ಕವನ್ನು ಈ ಕೆಳಕಂಡಂತೆ ನಮೂದಿಸಿದೆ.

ಅರ್ಜಿ ಸ್ವೀಕರಿಸಲು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿ ಪಾವತಿಸಬೇಕಾದ ಶುಲ್ಕ ವಿವರ

| | |
|---|---|
| ಇಲಾಖಾ ಸಮಸಂಖ್ಯೆ ಮೂಲ ಸುತ್ತೋಲೆ ದಿನಾಂಕ 04.07.2019 ರನ್ವಯ | ಸುತ್ತೋಲೆಯಲ್ಲಿ ವಿವರಿಸಿದಂತೆ ಶುಲ್ಕ |
| ವಿಸ್ತರಿಸಿದ ದಿನಾಂಕ 04.10.2019 ರಿಂದ 10.10.2019 ರವರೆಗಿನ ದಂಡ ಶುಲ್ಕದೊಂದಿಗೆ | ದಿನವೊಂದಕ್ಕೆ ರೂ 50/- ರಂತೆ (ರಜಾ ದಿನಗಳನ್ನು ಹೊರತು ಪಡಿಸಿ) |

ಮೇಲಿನಂತೆ ನಮೂದಿಸಿರುವ ದಂಡಶುಲ್ಕದ ದಿನಾಂಕಗಳನ್ನು ಈ ಕೆಳಂಡಂತೆ ತಿದ್ದಿ ಓದಿಕೊಳ್ಳತಕ್ಕದ್ದು.

ಅರ್ಜಿ ಸ್ವೀಕರಿಸಲು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿ ಪಾವತಿಸಬೇಕಾದ ಶುಲ್ಕ ವಿವರ

| | |
|---|---|
| ಇಲಾಖಾ ಸಮಸಂಖ್ಯೆ ಮೂಲ ಸುತ್ತೋಲೆ ದಿನಾಂಕ 04.07.2019 ರನ್ವಯ | ಸುತ್ತೋಲೆಯಲ್ಲಿ ವಿವರಿಸಿದಂತೆ ಶುಲ್ಕ |
| ವಿಸ್ತರಿಸಿದ ದಿನಾಂಕ 18.09.2019 ರಿಂದ 04.10.2019 ರವರೆಗಿನ ದಂಡ ಶುಲ್ಕದೊಂದಿಗೆ | ದಿನವೊಂದಕ್ಕೆ ರೂ 50/- ರಂತೆ (ರಜಾ ದಿನಗಳನ್ನು ಹೊರತು ಪಡಿಸಿ) |

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು :

1. ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಇಲಾಖಾ ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ.
4. ಕಛೇರಿ / ಹೆಚ್ಚುವರಿ ಪ್ರತಿ.